ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(4)/14/2021(ಭಾಗ)/657

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 18.10.2022

**ಅಧಿಕೃತ ಜ್ಞಾಪನ**

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯ ಉಳಿದ ಮೂಲ ವೃಂದ ಮತ್ತು ಸ್ಥಳೀಯ ವೃಂದದಲ್ಲಿ ಖಾಲಿಯಿದ್ದ ಕಾರ್ಯಾಗಾರ ವಿಭಾಗದ ಶಿಕ್ಷಕರ(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ) ಹುದ್ದೆಗೆ ನೀಡಿರುವ ಸ್ಥಾನಪನ್ನ ಬಡ್ತಿಯನ್ನು ಹಿಂಪಡೆಯುವ ಕುರಿತು.

**ಉಲ್ಲೇಖ:** 1. ತಾಂತ್ರಿಕ ಶಿಕ್ಷಣ ಇಲಾಖೆಯ ಆದೇಶ ಸಂಖ್ಯೆ:DTE-ADMIOEST(4)14/2021(ಭಾಗ)/660, ದಿ: 02.09.2022.
2. ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಾವಳಿ, 1977 ರ ನಿಯಮ.

*****

ಉಲ್ಲೇಖ(1) ರ ಆದೇಶದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಉಳಿದ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿನ ಕಾರ್ಯಾಗಾರ ವಿಭಾಗದ ಸಹ ಶಿಕ್ಷಕರ(ಸಹ ಬೋಧಕ)(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ) ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅರ್ಹ ಸಿಬ್ಬಂದಿಗಳಿಗೆ ಖಾಲಿಯಿರುವ ಗ್ರೂಪ್-ಸಿ ವೃಂದದ ವೇತನ ಶ್ರೇಣಿ ರೂ. 33450-62600 ರಲ್ಲಿನ ಶಿಕ್ಷಕರ(ಬೋಧಕ) ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಿ ಆದೇಶಿಸಲಾಗಿತ್ತು. ಮುಂಬಡ್ತಿ ಹೊಂದಿರುವ ಕೆಳಕಂಡ ಸಹ ಶಿಕ್ಷಕರುಗಳು ಇಲ್ಲಿಯವರೆಗೆ ಮುಂಬಡ್ತಿ ಹುದ್ದೆಯಲ್ಲಿ ಕಾರ್ಯವರದಿ ಮಾಡಿಕೊಂಡಿರುವುದಿಲ್ಲ. ಸದರಿಯವರುಗಳಿಗೆ ಮುಂಬಡ್ತಿ ನೀಡಿರುವ ಆದೇಶದಲ್ಲಿ, ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆಯಲ್ಲಿ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯು ಸ್ವಯಂಚಾಲಿತವಾಗಿ ರದ್ದಾಗುತ್ತದೆ ಎಂದು ತಿಳಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಉಲ್ಲೇಖ(1) ರಲ್ಲಿ ಕೆಳಕಂಡ ಸಿಬ್ಬಂದಿಗಳಿಗೆ ಸಹ ಶಿಕ್ಷಕರ ವೃಂದದಿಂದ ಶಿಕ್ಷಕರ ಹುದ್ದೆಗೆ ನೀಡಿರುವ ಸ್ಥಾನಪನ್ನ ಬಡ್ತಿಯನ್ನು ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಾವಳಿ, 1977 ರ ನಿಯಮ 4(ಎ) ರಂತೆ ಹಿಂಪಡೆಯಲಾಗಿದೆ.

| ಕ್ರ. ಸಂ. | ಮುಂಬಡ್ತಿ ಆದೇಶದ ಕ್ರಮಾಂಕ | ಸಹ ಶಿಕ್ಷಕರ ಮತ್ತು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಯ ಹೆಸರು | ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಿದ್ದ ಸಂಸ್ಥೆ |
|---|---|---|---|
| **ಉಳಿದ ಮೂಲ ವೃಂದ** | | | |
| 1. | 13 | ಮಧುಸೂಧನ್ ಜಿ.<br>ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಸರ್ಕಾರಿ ಪಾಲಿಟೆಕ್ನಿಕ್, ಚನ್ನಸಂದ್ರ |
| 2. | 16 | ಶ್ರೀಧರ್‌ಬಾಬು ಕೆ.ಎನ್.<br>ಸರ್ಕಾರಿ ಪಾಲಿಟೆಕ್ನಿಕ್, ಚನ್ನಸಂದ್ರ | ಸರ್ಕಾರಿ ಪಾಲಿಟೆಕ್ನಿಕ್, ಚಿಂತಾಮಣಿ |

"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"

19/10/22

**ಜಂಟಿ ನಿರ್ದೇಶಕರು(ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ:-**

1. ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಪ್ರಾಂಶುಪಾಲರಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ;
2. ಸಂಬಂಧಪಟ್ಟ ಸಹ ಶಿಕ್ಷಕರಿಗೆ(ಸಂಬಂಧಿಸಿದ ಪ್ರಾಂಶುಪಾಲರ ಮುಖಾಂತರ);
3. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ;
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

**ಪ್ರತಿ:-**

1. ಆಪ್ತಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಶಾಖಾ ರಕ್ಷಾ ಕಡತ.